# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 1619(1870)

ಮಾನ್ಯ ಸದಸ್ಯರ ಹೆಸರು : ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು :ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ :23-03-2026

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಇರುವ ರಾಜ್ಯ ಸರ್ಕಾರದ ಪ್ರಾಥಮಿಕ ಮಾಧ್ಯಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳಲ್ಲಿ ಯಾವ ಯಾವ ಪಠ್ಯೇತರ ಚಟುವಟಿಕೆಗಳನ್ನು ಮಾಡಲಾಗುತ್ತಿದೆ; (ಇವುಗಳ ವಿವರಗಳನ್ನು ಒದಗಿಸುವುದು) | ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮಕ್ಕೆ ಪ್ರತಿ ಕ್ಲಸ್ಟರ್‌ಗೆ ತಲಾ ರೂ.6,000/-ಗಳಂತೆ ಒಟ್ಟು 4103 ಕ್ಲಸ್ಟರ್ ಗಳಿಗೆ ರೂ.2,46,18,000/-ಗಳನ್ನು ಶಿಕ್ಷಕರ ಕಲ್ಯಾಣ ನಿಧಿ ಕಛೇರಿ ವತಿಯಿಂದ ಅನುದಾನ ಬಿಡುಗಡೆ ಮಾಡಲಾಗುತ್ತಿದ್ದು, ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯಮಟ್ಟದ ಕಾರ್ಯಕ್ರಮಗಳಿಗೆ ನಿರ್ದೇಶಕರು(ಅಲ್ಪಸಂಖ್ಯಾತ), ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರ ಕಛೇರಿಯಿಂದ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಸಮಗ್ರ ಶಿಕ್ಷಣ ಕರ್ನಾಟಕ ಕಛೇರಿಯಿಂದ ಕಲಾಉತ್ಸವ, ರಸಪ್ರಶ್ನೆ ಸ್ಪರ್ಧೆ, ಸ್ವಚ್ಛತಾ ಪಕ್ವಾಡ, ಸ್ವಾಮಿ ವಿವೇಕಾನಂದ ಜಯಂತಿ, ಏಕ್ ಭಾರತ್ ಶ್ರೇಷ್ಠ ಭಾರತ್, ಏಕತಾ ದಿವಸ, ತಂಬಾಕು ಮುಕ್ತ ಶಾಲೆ, ಇಕೋ ಕ್ಲಬ್ ನ ಚಟುವಟಿಕೆಗಳು, ಶಾಲಾ ಸುರಕ್ಷತೆ ಮತ್ತು ಭದ್ರತೆ ಕುರಿತು ಅರಿವು ಮೂಡಿಸುವ ಚಟುವಟಿಕೆಗಳನ್ನು ಶಾಲೆಗಳಲ್ಲಿ ಆಯೋಜಿಸಲು ಸುತ್ತೋಲೆಗಳನ್ನು ನೀಡಿ ಕಾರ್ಯಕ್ರಮಗಳನ್ನು ನಡೆಸಲಾಗುವುದು.<br><br>"**ಸಂಭ್ರಮ ಶನಿವಾರ**" ಅನುಷ್ಠಾನ ಕಾರ್ಯಕ್ರಮದಡಿ ವಿದ್ಯಾರ್ಥಿಗಳ ಬ್ಯಾಗ್ ಹೊರೆ ಕಡಿಮೆ ಮಾಡುವ ಉದ್ದೇಶದಿಂದ ಪ್ರತಿ ತಿಂಗಳ ಮೂರನೇ ಶನಿವಾರ ಮತ್ತು ಉರ್ದು ಶಾಲೆಗಳಿಗೆ ಮೂರನೇ ಶುಕ್ರವಾರವನ್ನು ಬ್ಯಾಗ್ ರಹಿತ ದಿನವನ್ನಾಗಿ ಆಚರಿಸಲಾಗುತ್ತಿದೆ. ಮಕ್ಕಳಿಗೆ ಚಟುವಟಿಕೆಯಾಧಾರಿತ ಸಂತಸದಾಯಕ ಕಲಿಕೆಯನ್ನು ನೀಡುವ ನಿಟ್ಟಿನಲ್ಲಿ ಹಾಗೂ ಮಕ್ಕಳನ್ನು ಬಹುಮುಖ ಚಟುವಟಿಕೆಗಳಲ್ಲಿ ತೊಡಗಿಸುವುದರ ಮೂಲಕ ನಾಗರಿಕ ಪ್ರಜ್ಞೆಯನ್ನು ಬೆಳೆಸಲು, ಅರಿವು, ಅನುಭವ ಮತ್ತು ಅವಲೋಕನ ಎಂಬ ಮೂರು ಹಂತಗಳಲ್ಲಿ 10 ವಿವಿಧ ವಿಷಯಗಳಲ್ಲಿ ವಿದ್ಯಾರ್ಥಿಗಳಿಗಾಗಿ ವಿದ್ಯಾರ್ಥಿ ಚಟುವಟಿಕೆ |

| | | |
|---|---|---|
| | | ಪುಸ್ತಕ ಹಾಗೂ ಶಿಕ್ಷಕರ ಕೈಪಿಡಿಯನ್ನು ಸಿದ್ಧಪಡಿಸಿ ಡಯಟ್‌ಗಳಿಗೆ 01 ಪ್ರತಿಯನ್ನು ಒದಗಿಸಿದೆ ಹಾಗೂ DSERT ವೆಬ್ ಸೈಟ್‌ನಲ್ಲಿ (https://dsert.karnataka.gov.in) ಅಪ್ಲೋಡ್ ಮಾಡಲಾಗಿದೆ. ರಾಜ್ಯದ ಎಲ್ಲಾ ಶಾಲೆಗಳಲ್ಲಿ ಕಾರ್ಯಕ್ರಮ ಅನುಷ್ಠಾನ ಕುರಿತು ಕ್ರಮವಹಿಸಲು ಸುತ್ತೋಲೆ ಮುಖೇನ ಮಾರ್ಗದರ್ಶನ ನೀಡಲಾಗುತ್ತಿದೆ ಮತ್ತು ನಿರಂತರ ಅನುಪಾಲನೆ ಮಾಡಲಾಗುತ್ತಿದೆ.<br><br>**ಮೌಲ್ಯ ಶಿಕ್ಷಣ**: 1 ರಿಂದ 10 ನೇ ತರಗತಿಗೆ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಮೌಲ್ಯ ಶಿಕ್ಷಣದ ವಿದ್ಯಾರ್ಥಿ ಚಟುವಟಿಕೆ ಪುಸ್ತಕಗಳನ್ನು ಸಿದ್ಧಪಡಿಸಲಾಗಿದೆ. ಈ ಸಂಬಂಧ ಒಂದು ಲಕ್ಷಕ್ಕೂ ಹೆಚ್ಚಿನ ಶಿಕ್ಷಕರಿಗೆ ತರಬೇತಿ ನೀಡಲಾಗಿದೆ. 2026-27ನೇ ಸಾಲಿಗೆ ಸದರಿ ಚಟುವಟಿಕಾ ಪುಸ್ತಕಗಳನ್ನು ತರಗತಿಗಳಲ್ಲಿ ಪ್ರತಿ ವಿದ್ಯಾರ್ಥಿಗೆ ನೀಡುವ ಮೂಲಕ ಅನುಷ್ಠಾನಿಸಲು ಕ್ರಮವಹಿಸಲಾಗುತ್ತಿದೆ. |
| ಆ) | ಸರ್ಕಾರದ ಶಿಕ್ಷಣೇತರ ಚಟುವಟಿಕೆಗಳಲ್ಲಿ ಪ್ರತಿದಿನ ಶಿಕ್ಷಕರು ಎಷ್ಟು ಗಂಟೆ ಸಮಯವನ್ನು ಪಠ್ಯೇತರ ಚಟುವಟಿಕೆಗಳಿಗೆ ವಿನಯೋಗಿಸುತ್ತಿದ್ದಾರೆ; ಸರ್ಕಾರಕ್ಕೆ ಇದರ ಮಾಹಿತಿ ಇದೆಯೇ; (ಇದ್ದಲ್ಲಿ ಪೂರ್ಣ ವಿವರಗಳನ್ನು ಒದಗಿಸುವುದು) | "ಸಂಭ್ರಮ ಶನಿವಾರ" ಪ್ರತಿ ತಿಂಗಳ ಮೂರನೇ ಶನಿವಾರದಂದು ಮತ್ತು ಉರ್ದು ಶಾಲೆಗಳಲ್ಲಿ ಮೂರನೇ ಶುಕ್ರವಾರದಂದು ಲಭ್ಯವಿರುವ ಐದು ಅವಧಿಗಳು ಮೌಲ್ಯ ಶಿಕ್ಷಣ ವಾರಕ್ಕೆ ಒಂದು ಅವಧಿ. |
| ಇ) | ಶಾಲಾ ಶಿಕ್ಷಣ ಇಲಾಖೆಯಲ್ಲಿ (ಪಿಯು ಹೊರತುಪಡಿಸಿ) ರಾಜ್ಯದ ಎಷ್ಟು ಶಿಕ್ಷಕರು ಪಠ್ಯೇತರ ಚಟುವಟಿಕೆಗಳಲ್ಲಿ ನಿರತರಾಗಿರುತ್ತಾರೆ; ಇವರಿಗೆ ರಾಜ್ಯ ಸರ್ಕಾರ ವೇತನ ಹೊರತುಪಡಿಸಿ ಬೇರೆ ವೇತನ ಅಥವಾ ಭತ್ಯೆಯನ್ನು ಪಾವತಿ ಮಾಡುತ್ತಿದೆಯೇ; (ಮಾಡುತ್ತಿದ್ದಲ್ಲಿ ಅದರ ವಿವರಗಳನ್ನು ಒದಗಿಸುವುದು) | ಶಾಲಾ ಶಿಕ್ಷಣ ಇಲಾಖೆಯಲ್ಲಿ ಪಠ್ಯೇತರ ಚಟುವಟಿಕೆಗಳಿಗೆ ಶಿಕ್ಷಕರನ್ನು ಪೂರ್ಣ ಕಾಲಿಕವಾಗಿ ನಿಯೋಜಿಸದಿರುವುದರಿಂದ ಯಾವುದೇ ವಿಶೇಷ ಭತ್ಯೆಯನ್ನು ಪಾವತಿಸುವುದಿಲ್ಲ. |

<table>
<tr><td>ಈ)</td><td>ಶಾಲಾ ಶಿಕ್ಷಣ ಇಲಾಖೆಯಲ್ಲಿ ಪಠ್ಯೇತರ ಚಟುವಟಿಕೆಗಳನ್ನು ಕಡಿಮೆಗೊಳಿಸಲು ರಾಜ್ಯ ಸರ್ಕಾರ ಯಾವುದಾದರೂ ಯೋಜನೆಯನ್ನು ಹೊಂದಿದೆಯೇ; ಹೊಂದಿದ್ದಲ್ಲಿ, (ಅದರ ವಿವರಗಳನ್ನು ಒದಗಿಸುವುದು);</td><td rowspan="2">ಶಾಲಾ ಶಿಕ್ಷಣ ಇಲಾಖೆಯಲ್ಲಿ ಪಠ್ಯೇತರ ಚಟುವಟಿಕೆಗಳಿಗೆ ಶಿಕ್ಷಕರನ್ನು ಪೂರ್ಣ ಕಾಲಿಕವಾಗಿ ನಿಯೋಜಿಸದಿರುವುದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ.</td></tr>
<tr><td>ಉ)</td><td>ಶಾಲಾ ಶಿಕ್ಷಣ ಇಲಾಖೆಯಲ್ಲಿ ಪ್ರಾಥಮಿಕ ಮಾಧ್ಯಮಿಕ ಮತ್ತು ಪ್ರೌಢಶಾಲೆಯ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲಾ ಶಿಕ್ಷಕರನ್ನು ಪಠ್ಯೇತರ ಚಟುವಟಿಕೆಗಳಿಗೆ ಬಳಸುತ್ತಿರುವುದರಿಂದ ಬೋಧನಾ ಕಾರ್ಯಕ್ರಮ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ತೊಡೆದು ಹಾಕಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ? (ವಿವರಗಳನ್ನು ಒದಗಿಸುವುದು)</td></tr>
</table>

**ಇಪಿ 66 ಪಿಎಂಎ 2026**

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ

ಸಚಿವರು